# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 770 (933) |
| ಮಾನ್ಯ ಸದಸ್ಯರ ಹೆಸರು | : | ಶ್ರೀಮತಿ ಹೇಮಲತಾ ನಾಯಕ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 15.12.2025 |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | 2024-25ನೇ ಶೈಕ್ಷಣಿಕ ವರ್ಷದಿಂದ ಇಂದಿನವರೆಗೆ ರಾಜ್ಯದಾದ್ಯಂತ ಹಾಗೂ ಪ್ರತಿ ಜಿಲ್ಲಾವಾರು ಎಷ್ಟು ಸರ್ಕಾರಿ ಕನ್ನಡ ಮಾದರಿ ಶಾಲೆಗಳನ್ನು ಮುಚ್ಚಲಾಗಿದೆ; (ಜಿಲ್ಲಾವಾರು ಮಾಹಿತಿ ಒದಗಿಸುವುದು) ಸರ್ಕಾರಿ ಶಾಲೆಗಳನ್ನು ಮುಚ್ಚಲು ಸರ್ಕಾರ ಬಳಸಿರುವ ಮಾನದಂಡಗಳು ಯಾವುವು; (ವಿವರ ನೀಡುವುದು) | ರಾಜ್ಯದಲ್ಲಿ ಯಾವುದೇ ಸರ್ಕಾರಿ ಪ್ರಾಥಮಿಕ ಶಾಲೆಗಳನ್ನು ಮುಚ್ಚಿರುವುದಿಲ್ಲ. ಮಕ್ಕಳ ಶೂನ್ಯ ದಾಖಲಾತಿಯಿಂದಾಗಿ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿರುತ್ತದೆ. ಪುನಃ ಮಕ್ಕಳು ದಾಖಲಾತಿಯಾದಲ್ಲಿ ಶಾಲೆಗಳನ್ನು ಪುನರಾರಂಭಿಸಲಾಗುವುದು. |
| ಆ) | ಮುಚ್ಚಲು ನಿರ್ಧರಿಸಿರುವ ಶಾಲೆಗಳನ್ನು ವಿಲೀನಗೊಳಿಸುವ ಬದಲಿಗೆ, ಅವುಗಳನ್ನು ಉನ್ನತೀಕರಿಸಿ ಅಗತ್ಯ ಮೂಲಸೌಕರ್ಯಗಳು ಶಿಕ್ಷಕರ ನಿಯೋಜನೆ ಮತ್ತು ಗುಣಮಟ್ಟದ ಶಿಕ್ಷಣ ಒದಗಿಸುವ ಕುರಿತು ಸರ್ಕಾರ ಯಾವ ಪರ್ಯಾಯ ಕ್ರಮಗಳನ್ನು ಪರಿಶೀಲಿಸಿದೆ; ಇದು ಶಿಕ್ಷಣ ಹಕ್ಕು ಕಾಯ್ದೆ (ಆರ್‌ಟಿಇ)ಯ ನಿಬಂಧನೆಗಳಿಗೆ ವಿರೋಧವಾಗುವುದಿಲ್ಲವೆ: (ವಿವರ ನೀಡುವುದು). | ಪ್ರಶ್ನೆ ಉದ್ಭವಿಸುವುದಿಲ್ಲ. |
| ಇ) | ಕೆಪಿಎಸ್ ಮಾದರಿ ಶಾಲೆಗಳಿಗೆ ವಿಲೀನ ಮಾಡಿದ ನಂತರ, ಸುತ್ತಮುತ್ತಲಿನ ಹಳ್ಳಿ ಹಾಗೂ ದುರ್ಗಮ ಪ್ರದೇಶಗಳ ಮಕ್ಕಳಿಗೆ ಸರ್ಕಾರಿ ಸಾರಿಗೆ/ಬಸ್ ಸೌಲಭ್ಯವನ್ನು ಒದಗಿಸುವ ಕುರಿತು ಸರ್ಕಾರದ ಯೋಜನೆ ಏನು: ಸಾರಿಗೆ ಸೌಲಭ್ಯ ಇಲ್ಲದಿದ್ದರೆ, ಶಾಲಾ ಮಕ್ಕಳ ದಾಖಲಾತಿಯಲ್ಲಿ ಇಳಿಕೆಯಾಗುವ ಸಮಸ್ಯೆಯನ್ನು ಸರ್ಕಾರದ ಗಮನಕ್ಕೆ ತೆಗೆದುಕೊಂಡಿದೆಯೇ: (ವಿವರ ನೀಡುವುದು). | ಕೆ.ಪಿ.ಎಸ್ ಶಾಲೆಯೊಂದಿಗೆ ವಿಲೀನಗೊಳ್ಳುವ ಸುತ್ತಮುತ್ತಲಿನ ಶಾಲೆಗಳ ವಿದ್ಯಾರ್ಥಿಗಳಿಗೆ ಉಚಿತ ಸಾರಿಗೆ ವ್ಯವಸ್ಥೆಯನ್ನು ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (SDMC) ಮೂಲಕ ಒದಗಿಸಲು ತಿಳಿಸಲಾಗಿದೆ. ಆದೇಶದ ಪ್ರತಿಯನ್ನು ಅನುಬಂಧದಲ್ಲಿ ಒದಗಿಸಿದೆ. |

| | | |
|---|---|---|
| ಈ) | ಸರ್ಕಾರಿ ಶಾಲೆಗಳ ಮುಚ್ಚುವಿಕೆ, ವಿಲೀನ, ಹಾಗೂ ಖಾಸಗಿ / ಕಾನ್ವೆಂಟ್ ಶಾಲೆಗಳತ್ತ ಮಕ್ಕಳ ವಲಸೆ ಹೆಚ್ಚುತ್ತಿರುವ ಹಿನ್ನಲೆಯಲ್ಲಿ ಗ್ರಾಮೀಣ ಮಕ್ಕಳ ಶಿಕ್ಷಣ ಹಕ್ಕು ರಕ್ಷಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು? (ವಿವರ ನೀಡುವುದು). | **ಮಕ್ಕಳ ಶಿಕ್ಷಣ ಹಕ್ಕು ರಕ್ಷಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳು:**<br>• ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿಯನ್ನು ಹೆಚ್ಚಿಸಲು ಸರ್ಕಾರಿ ಶಾಲಾ ಮಕ್ಕಳಿಗೆ ಮಧ್ಯಾಹ್ನದ ಬಿಸಿಊಟ, ಕ್ಷೀರಭಾಗ್ಯ, ಪಠ್ಯಪುಸ್ತಕ, ಸಮವಸ್ತ್ರ, ಮುಂತಾದ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.<br>• ಪಿ.ಟಿ.ಆರ್. ಆಧಾರದಲ್ಲಿ ಅಗತ್ಯ ಸಂಖ್ಯೆಯ ಶಿಕ್ಷಕರನ್ನು ಒದಗಿಸಲಾಗುತ್ತಿದೆ.<br><br>**ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ:**<br>• ಕನ್ನಡ / ಇತರೆ ಮಾಧ್ಯಮದ ಒಟ್ಟು **9522** ಪ್ರಾಥಮಿಕ ಶಾಲೆಗಳಲ್ಲಿ ಆಂಗ್ಲ ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಲು ಆದೇಶಿಸಲಾಗಿದೆ.<br>• 2024-25ನೇ ಸಾಲಿಗೆ **59** ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ (6-7ನೇ ತರಗತಿ) ಶಾಲೆಗಳನ್ನಾಗಿ ಮತ್ತು **91** ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು 8ನೇ ತರಗತಿಗೆ ಉನ್ನತೀಕರಿಸಿ ಆದೇಶಿಸಲಾಗಿರುತ್ತದೆ.<br>• 2025-26ನೇ ಸಾಲಿಗೆ 06 ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ (6-7 ಮತ್ತು 8ನೇ ತರಗತಿ) ಶಾಲೆಗಳನ್ನಾಗಿ ಮತ್ತು 01 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು 8ನೇ ತರಗತಿಯವರೆಗೆ ಹೀಗೆ ಒಟ್ಟು 07 ಶಾಲೆಗಳನ್ನು ಉನ್ನತೀಕರಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಲಾಗಿರುತ್ತದೆ.<br><br>**ಸರ್ಕಾರಿ ಪ್ರೌಢಶಾಲೆಗೆ ಸಂಬಂಧಿಸಿದಂತೆ:**<br>• 2025-26ನೇ ಸಾಲಿನಲ್ಲಿ 147 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು ಹಾಗೂ ದಿನಾಂಕ: 16.09.2025ರ ಸರ್ಕಾರದ ಆದೇಶದಲ್ಲಿ 35 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು, ಒಟ್ಟು 182 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು ಸರ್ಕಾರಿ ಪ್ರೌಢ ಶಾಲೆಗಳನ್ನಾಗಿ ಉನ್ನತೀಕರಿಸಿ ಆದೇಶಿಸಿದೆ. |

| | | |
|---|---|---|
| | | • 2025-26ನೇ ಸಾಲಿನಲ್ಲಿ ಎ.ಡಿ.ಬಿ. ನೆರವಿನೊಂದಿಗೆ 500 ಶಾಲೆಗಳನ್ನು ಕೆ.ಪಿ.ಎಸ್. ಶಾಲೆಗಳನ್ನಾಗಿ ಅಭಿವೃದ್ಧಿಪಡಿಸಲು ಯೋಜಿಸಿದ್ದು, 474 ಶಾಲೆಗಳನ್ನು ಕೆ.ಪಿ.ಎಸ್. ಆಗಿ ಉನ್ನತೀಕರಿಸಲು ಆದೇಶಿಸಿದೆ.<br>• ಕಲ್ಯಾಣ ಕರ್ನಾಟಕದ ಅಕ್ಷರ ಅವಿಷ್ಕಾರ ಯೋಜನೆಯಡಿಯಲ್ಲಿ 200 ಶಾಲೆಗಳನ್ನು ಕೆ.ಪಿ.ಎಸ್. ಆಗಿ ಉನ್ನತೀಕರಿಸಲು ಆದೇಶಿಸಿದೆ.<br>• 2026-27ನೇ ಸಾಲಿನಲ್ಲಿ ದಾಖಲಾತಿ ಹೆಚ್ಚಿಸಲು ದಾಖಲಾತಿ ಆಂದೋಲನ ನಡೆಸಲು ಕ್ರಮವಹಿಸಲಾಗಿದೆ.<br>• 2026-27ನೇ ಸಾಲಿನ ದಾಖಲಾತಿ ಆಂದೋಲನ ವನ್ನು 14 ನವೆಂಬರ್ 2025 ರಿಂದ 30 ಜೂನ್ 2026 ರ ವರೆಗೆ ಹಮ್ಮಿಕೊಳ್ಳಲಾಗಿದೆ. |

**ಇಪಿ 149 ಪಿಎಂಎ 2025**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಅನುಬಂಧ

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ**: ರಾಜ್ಯದಲ್ಲಿರುವ ಆಯ್ದ ಸರ್ಕಾರಿ ಶಾಲೆಗಳನ್ನು (ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ 200 ಶಾಲೆಗಳನ್ನು ಹಾಗೂ ರಾಜ್ಯದ ಇತರೆಡೆ 500 ಶಾಲೆಗಳನ್ನು) ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಉನ್ನತೀಕರಿಸಿ, ಹೆಚ್ಚುವರಿ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ.

*******

**ಪ್ರಸ್ತಾವನೆ:-**

ಕರ್ನಾಟಕದಲ್ಲಿ ಸುಮಾರು 47,493 ಸರ್ಕಾರಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಿವೆ. ಇವುಗಳಲ್ಲಿ 19,603 ಪ್ರಾಥಮಿಕ ಶಾಲೆಗಳು, 21,676 ಹಿರಿಯ ಪ್ರಾಥಮಿಕ ಶಾಲೆಗಳು, 4,895 ಪ್ರೌಢಶಾಲೆಗಳು ಮತ್ತು 1,319 ಪದವಿಪೂರ್ವ ಕಾಲೇಜುಗಳಿರುತ್ತವೆ. ಒಟ್ಟಾರೆಯಾಗಿ ಕೇವಲ 309 ಶಾಲೆಗಳು ಎಲ್.ಕೆ.ಜಿಯಿಂದ 12ನೇ ತರಗತಿಯವರೆಗೆ ಸಂಯುಕ್ತ ವ್ಯವಸ್ಥೆಯನ್ನು ಹೊಂದಿವೆ. ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿಯು 2015-16ರಲ್ಲಿ 47.1 ಲಕ್ಷದಿಂದ 2025-26ರಲ್ಲಿ 38.2 ಲಕ್ಷಕ್ಕೆ (19% ಕಡಿಮೆ) ಕುಸಿದಿರುತ್ತದೆ. ಒಟ್ಟು ದಾಖಲಾತಿಯಲ್ಲಿ ಸರ್ಕಾರಿ ಶಾಲೆಗಳ ಪಾಲು 46% ರಿಂದ 38% ಕ್ಕೆ ಕುಸಿದಿರುತ್ತದೆ. ಆದರೆ ಖಾಸಗಿ ಅನುದಾನರಹಿತ ಶಾಲೆಗಳ ಪಾಲು 2015-16ರಲ್ಲಿ 36.3 ಲಕ್ಷ ವಿದ್ಯಾರ್ಥಿಗಳಿಂದ 2025-26ರಲ್ಲಿ 47 ಲಕ್ಷ ವಿದ್ಯಾರ್ಥಿಗಳಿಗೆ (29%) ಹೆಚ್ಚಾಗಿದೆ. 2025-26ನೇ ಸಾಲಿನಲ್ಲಿ 50 ಅಥವಾ ಅದಕ್ಕಿಂತ ಕಡಿಮೆ ವಿದ್ಯಾರ್ಥಿಗಳ ದಾಖಲಾತಿ ಹೊಂದಿರುವ ಸರ್ಕಾರಿ ಶಾಲೆಗಳ ಸಂಖ್ಯೆ 25,683ಕ್ಕೆ ಏರಿಕೆಯಾಗಿದೆ.

ಪ್ರಸ್ತುತ ಒಟ್ಟು ದಾಖಲಾತಿ ಅನುಪಾತ (Gross Enrolment Ratio) ಕಿರಿಯ ಪ್ರಾಥಮಿಕ ವಿಭಾಗದಲ್ಲಿ ಶೇ. 98.65, ಹಿರಿಯ ಪ್ರಾಥಮಿಕ ವಿಭಾಗ ಶೇ. 99.79 ಮತ್ತು ಪ್ರೌಢಶಾಲೆಗೆ ಸಂಬಂಧಿಸಿದಂತೆ ಶೇ. 96.08 ಇರುತ್ತದೆ. ಶಾಲೆಯಿಂದ ಹೊರಗುಳಿಯುವ ವಿದ್ಯಾರ್ಥಿಗಳ ದರ (Drop out rate) ಕಿರಿಯ ಪ್ರಾಥಮಿಕ ವಿಭಾಗದಲ್ಲಿ ಶೇ. 2.50, ಹಿರಿಯ ಪ್ರಾಥಮಿಕ ವಿಭಾಗ ಶೇ.2.91 ಮತ್ತು ಪ್ರೌಢಶಾಲೆಗೆ ಸಂಬಂಧಿಸಿದಂತೆ ಶೇ.22.88 ಇರುತ್ತದೆ. ಪ್ರಾಥಮಿಕ ಹಂತದಿಂದ ಪ್ರೌಢಶಾಲಾ ಹಂತಕ್ಕೆ ಮುಂದುವರೆಯುವ ವಿದ್ಯಾರ್ಥಿಗಳ ಸಂಖ್ಯೆಯಲ್ಲಿ ಗಣನೀಯವಾಗಿ ಕಡಿಮೆ ಆಗುತ್ತಿರುವುದನ್ನು ಗಮನಿಸಲಾಗಿದೆ. ಶಾಲೆಯಿಂದ ಹೊರಗುಳಿಯುವ ವಿದ್ಯಾರ್ಥಿಗಳ ದರ (Drop out rate)ವನ್ನು ಕಡಿಮೆ ಮಾಡಲು ಒಂದೇ ಆವರಣದಲ್ಲಿ ಪ್ರಾಥಮಿಕ ತರಗತಿಗಳಿಂದ ಪದವಿಪೂರ್ವ ತರಗತಿಗಳವರೆಗೆ ಶಿಕ್ಷಣ ನೀಡಲು ಅವಕಾಶ ಕಲ್ಪಿಸುವುದು ಸೂಕ್ತ ಪರಿಹಾರವಾಗಿರುತ್ತದೆ.

ಕರ್ನಾಟಕ ಪಬ್ಲಿಕ್ ಶಾಲೆಗಳು (KPS) ಗುಣಮಟ್ಟದ ಸಾರ್ವಜನಿಕ ಶಿಕ್ಷಣಕ್ಕಾಗಿ ಒಂದು ಅಭೂತಪೂರ್ವ ಬದಲಾವಣೆಯ ಚೌಕಟ್ಟನ್ನು ಒದಗಿಸುತ್ತವೆ. ಕರ್ನಾಟಕ ಸರ್ಕಾರವು ವಿದ್ಯಾರ್ಥಿಗಳ ಗುಣಮಟ್ಟದ ಕಲಿಕೆ ಮತ್ತು ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಳಕ್ಕೆ ಆರಂಭಿಸಿದ ಒಂದು

ಸುಧಾರಣಾತ್ಮಕ ಕಾರ್ಯತಂತ್ರವೇ ಕೆ.ಪಿ.ಎಸ್ ಆಗಿವೆ. ಈ ಮಾದರಿಯು ಒಂದೇ ಸೂರಿನಡಿಯಲ್ಲಿ (ಕ್ಯಾಂಪಸ್‌ನಲ್ಲಿ) ಶಾಲಾಪೂರ್ವ ತರಗತಿಗಳಿಂದ (LKG ಯಿಂದ) 12ನೇ ತರಗತಿಯವರೆಗಿನ (II ಪಿಯುಸಿ) ಶಿಕ್ಷಣವನ್ನು ಒದಗಿಸುತ್ತದೆ. ಇದು ಕಲಿಕೆಯ ಗುಣಮಟ್ಟವನ್ನು ಉತ್ತಮಪಡಿಸಲು ಉತ್ತೇಜಿಸುತ್ತದೆ. ಅಲ್ಲದೇ ಪ್ರಾಥಮಿಕ, ಮಾಧ್ಯಮಿಕ ಮತ್ತು ಪಿಯುಸಿ ಹಂತಗಳಲ್ಲಿ ದಾಖಲಾತಿ ಹಂತದಲ್ಲಿ ಸೋರುವಿಕೆ/ ಶಾಲೆ ಬಿಡುವಿಕೆಯ ದರವನ್ನು ಕಡಿಮೆ ಮಾಡುತ್ತದೆ. 2018-19ರಲ್ಲಿ 176 ಶಾಲೆಗಳೊಂದಿಗೆ ಆರಂಭವಾದ KPSಗಳು ಪ್ರಸ್ತುತ ರಾಜ್ಯದಾದ್ಯಂತ 309 ಶಾಲೆಗಳಾಗಿ ವಿಸ್ತಾರಗೊಂಡಿವೆ.

2021ರಲ್ಲಿ KPS ಶಾಲೆಗಳ ಸರಾಸರಿ ದಾಖಲಾತಿ ಸುಮಾರು 785 ವಿದ್ಯಾರ್ಥಿಗಳಾಗಿದ್ದು, 2025-26ರಲ್ಲಿ ಇದು ಸುಮಾರು 819 ವಿದ್ಯಾರ್ಥಿಗಳಿಗೆ ಏರಿಕೆಯಾಗಿದೆ. KPS ಶಾಲೆಗಳ 10ನೇ ತರಗತಿಯ ಪರೀಕ್ಷೆಯ ಫಲಿತಾಂಶ 79.97%ರಷ್ಟಿರುತ್ತದೆ. ಈ ಶಾಲೆಗಳಿಗೆ ಸಮುದಾಯದ ಬೆಂಬಲ, ಮೂಲಸೌಕರ್ಯ ಬಲವರ್ಧನೆ ಅಥವಾ ಬೇಡಿಕೆಗನುಗುಣವಾದ ಪ್ರೋತ್ಸಾಹದ ಅಗತ್ಯವಿರುತ್ತದೆ.

2018 ಮತ್ತು 2024ರ ನಡುವೆ ಸ್ಥಾಪಿತವಾದ 308 KPS ಗಳು 2.8 ಲಕ್ಷ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುತ್ತಿವೆ. ಪ್ರಸ್ತುತ 2025-26ರಲ್ಲಿ ದಾಖಲಾತಿ ಚೇತರಿಕೆಯು ಭರವಸೆಯನ್ನುಂಟು ಮಾಡಿದೆ. ಆದರೆ ಈ ಬೆಳವಣಿಗೆಯ ಸುಸ್ಥಿರತೆಗಾಗಿ ಅಗತ್ಯ ನೀತಿಗಳು, ಸರ್ಕಾರದ ಮಧ್ಯವರ್ತನಗಳ ಅಗತ್ಯವಿರುತ್ತದೆ. ಇಲಾಖೆಯಿಂದ ನಿರಂತರ ಪರಿಶೀಲನೆಯ ಕೊರತೆ, KPS ಶಾಲೆಗಳಿಗೆ ಗುಣಮಟ್ಟ ಕಾರ್ಯಾಚರಣೆಯ ನೀತಿಯನ್ನು ಹೊಂದಿರದಿರುವುದು, ಶಿಕ್ಷಕರ ನಿರಂತರತೆಯ ಕೊರತೆ, ಒಂದೇ KPS ಶಾಲೆಯಲ್ಲಿ ಶಿಕ್ಷಣವನ್ನು ಮುಂದುವರಿಸಲು ವಿದ್ಯಾರ್ಥಿಗೆ ಕನಿಷ್ಠ ನಾಲ್ಕು ವರ್ಗಾವಣೆ ಪ್ರಮಾಣಪತ್ರಗಳನ್ನು ಪಡೆಯುವ ಅಗತ್ಯ, ನಾಲ್ಕು ವಿಭಿನ್ನ UDISE ಕೋಡ್‌ಗಳ ಇರುವಿಕೆ, KPS ಶಾಲೆಗಳು ಮತ್ತು ಕಾಲೇಜುಗಳಿಂದ ನಾಲ್ಕು ವಿಭಿನ್ನ ಬ್ಯಾಂಕ್ ಖಾತೆಗಳ ನಿರ್ವಹಣೆ, ಇದರಿಂದಾಗಿ ಧನಸಹಾಯದ ಕಾರ್ಯನಿರ್ವಹಣೆಯಾಗದಿರುವುದು ಅಥವಾ ವಿಭಿನ್ನವಾಗಿ ಹಣ ಉಪಯೋಗವಾಗುವುದು, ಸಾರ್ವಜನಿಕ ಪರೀಕ್ಷೆಯ ಫಲಿತಾಂಶಗಳು ಕಡಿಮೆಯಾಗಿರುವುದು, ಇತ್ಯಾದಿ, ಇವುಗಳು KPS ಶಾಲೆಗಳ ಇತರೆ ಸಮಸ್ಯೆಗಳಾಗಿವೆ.

ಕರ್ನಾಟಕ ಪಬ್ಲಿಕ್ ಶಾಲೆಗಳು (KPS) ಉನ್ನತ ಗುಣಮಟ್ಟದ, ಭವಿಷ್ಯ-ಕೇಂದ್ರಿತ ಶಿಕ್ಷಣವನ್ನು ಸಂಯುಕ್ತವಾಗಿ ಹಾಗೂ ಸಮಗ್ರವಾಗಿ ಒದಗಿಸುವ ಹಾಗು ವಿದ್ಯಾರ್ಥಿಗಳ ಕಲಿಕೆಯನ್ನು ಮತ್ತು ಫಲಿತಾಂಶಗಳನ್ನು ಗಮನಾರ್ಹವಾಗಿ ಸುಧಾರಿಸುವ ಗುರಿಯನ್ನು ಹೊಂದಿದೆ. KPSಗಳು ತಮ್ಮ ಉದ್ದೇಶಕ್ಕೆ ಅನುಗುಣವಾಗಿ ಉನ್ನತ ಗುಣಮಟ್ಟದ ಶಿಕ್ಷಣವನ್ನು ಒದಗಿಸಲು KPS ನೀತಿಯ ಕೈಪಿಡಿಯನ್ನು ತರಲಾಗಿದೆ. ಈ ನೀತಿಯು ಮೂಲಸೌಕರ್ಯ ಮತ್ತು ಶೈಕ್ಷಣಿಕ ಮಾನದಂಡಗಳನ್ನು ಹೊಂದಿರುತ್ತದೆ. ಸಣ್ಣ ಗಾತ್ರದ ಶಾಲೆಗಳನ್ನು ಸಂಭಾವ್ಯ KPS ಶಾಲೆಗಳ ಆಯ್ಕೆಯಲ್ಲಿ ಸಮ್ಮಿಳಿತಗೊಳಿಸಿ, ಶಾಲಾ ಏಕೀಕರಣ ಪ್ರಕ್ರಿಯೆಗೆ ಆದ್ಯತೆ ನೀಡಲಾಗುತ್ತಿದ್ದು, ಸಣ್ಣ ಗಾತ್ರದ ಶಾಲೆಗಳ ಸಮಸ್ಯೆಗಳನ್ನು ಪರಿಹಾರಗೊಳಿಸಲು ಇಲಾಖೆಯು ಕನಿಷ್ಠ 1200 ವಿದ್ಯಾರ್ಥಿಗಳ ಸಾಮರ್ಥ್ಯದೊಂದಿಗೆ ಸಂಯುಕ್ತ ಹಾಗೂ ಸಂಪನ್ಮೂಲ ಶಾಲೆಗಳಾಗಿ ಏಕೀಕರಿಸುವ ಗುರಿಯನ್ನು ಹೊಂದಿದೆ. ಸಂಯುಕ್ತ ಶಾಲಾ ಸಂಕೀರ್ಣಗಳನ್ನು ರಚಿಸಲು ಎರಡು-ಹಂತದ ರಚನಾತ್ಮಕ

ಪ್ರಕ್ರಿಯೆಯನ್ನು ಅಳವಡಿಸಿಕೊಳ್ಳಲಾಗುತ್ತಿದೆ. ಮೊದಲನೆಯದಾಗಿ, ಪ್ರತಿ ಕ್ಲಸ್ಟರ್‌ನಲ್ಲಿ ಗ್ರೇಡ್ ಕವರೇಜ್, ದಾಖಲಾತಿ, ಸ್ಥಳ ಮತ್ತು ಮೂಲಸೌಕರ್ಯದ ಆಧಾರದ ಮೇಲೆ ಸ್ಕೋರಿಂಗ್ ವಿಧಾನವನ್ನು ಬಳಸಿ 'ಮ್ಯಾಗ್ನೆಟ್ ಶಾಲೆ'ಯನ್ನು ಗುರುತಿಸಲಾಗಿದೆ. ಎರಡನೆಯದಾಗಿ 3 ರಿಂದ 5 ಕಿ.ಮೀ ವ್ಯಾಪ್ತಿಯೊಳಗಿನ ಸಣ್ಣ ಗಾತ್ರದ ಶಾಲೆಗಳನ್ನು ಆಯ್ದ ಮ್ಯಾಗ್ನೆಟ್ ಶಾಲೆಗೆ ಜೋಡಿಸುವ ಸಂಭಾವ್ಯ ಶಾಲೆಗಳಾಗಿ ಗುರುತಿಸಲಾಗಿದೆ.

ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರು ರಾಜ್ಯ ಆಯವ್ಯಯದ ಅನುದಾನ ಮತ್ತು ಏಷಿಯನ್ ಡೆವಲಪ್‌ಮೆಂಟ್ ಬ್ಯಾಂಕ್ ಸಾಲಯೋಜನೆಯಡಿ 2025-26 ಮತ್ತು 2026-27ನೇ ಸಾಲುಗಳಲ್ಲಿ ಆಯ್ದ 500 ಸರ್ಕಾರಿ ಶಾಲೆಗಳನ್ನು (ಮ್ಯಾಗ್ನೆಟ್ ಶಾಲೆಗಳು) ಗುರುತಿಸಿ ಸುಸಜ್ಜಿತ ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಉನ್ನತೀಕರಿಸಲು ಮತ್ತು ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ ಆಯುಕ್ತಾಲಯ, ಕಲಬುರಗಿ ಇವರು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅನುದಾನದಲ್ಲಿ 2025-26 ಮತ್ತು 2026-27ನೇ ಸಾಲುಗಳಲ್ಲಿ ಆಯ್ದ 200 ಸರ್ಕಾರಿ ಶಾಲೆಗಳನ್ನು(ಮ್ಯಾಗ್ನೆಟ್ ಶಾಲೆಗಳು) ಗುರುತಿಸಿ ಸುಸಜ್ಜಿತ ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಉನ್ನತೀಕರಿಸಲು ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾಪಿತ ಯೋಜನೆಯು ಆಯ್ಕೆ ಮಾನದಂಡಗಳ ಆಧಾರದ ಮೇಲೆ ಗುರುತಿಸಲಾದ 700 ಶಾಲೆಗಳನ್ನು ಮಾದರಿ KPS ಶಾಲೆಗಳಾಗಿ ಪರಿವರ್ತಿಸುವತ್ತ ಕೇಂದ್ರೀಕರಿಸುತ್ತದೆ. ಇದರಲ್ಲಿ ಉತ್ತಮ ಸಂಪನ್ಮೂಲ ಬಳಕೆ ಮತ್ತು ದಕ್ಷ ಆಡಳಿತಕ್ಕಾಗಿ ಶಾಲಾ ಸಂಕೀರ್ಣಗಳ ಸ್ಥಾಪನೆಯ ಮೂಲಕ ಶಾಲಾ ಏಕೀಕರಣವನ್ನು ಒಳಗೊಂಡಿರುತ್ತದೆ. ಈ ಪರಿವರ್ತನೆಯು ಎಲ್ಲಾ KPS ಶಾಲೆಗಳಲ್ಲಿ ಮೂಲಭೂತ ಸಿವಿಲ್ ಮತ್ತು ಕಲಿಕಾ ಮೂಲಸೌಕರ್ಯವನ್ನು ನವೀಕರಿಸುವ ಮೂಲಕ ಕಲಿಕೆಯ ಸುಧಾರಣೆಯನ್ನು ಒಳಗೊಂಡಿರುತ್ತದೆ. ಈ ಶಾಲೆಗಳಲ್ಲಿ LKG ಯಿಂದ 5ನೇ ತರಗತಿಯವರೆಗೆ ಏಕ ತರಗತಿ ಪಠ್ಯಪುಸ್ತಕ ಆಧಾರಿತ ದ್ವಿಭಾಷಾ ಮಾಧ್ಯಮದ ಬೋಧನೆಯನ್ನು ಮತ್ತು 6 ರಿಂದ 10ನೇ ತರಗತಿಯವರೆಗೆ ಮಾಧ್ಯಮವಾರು ಏಕತರಗತಿ ಪಠ್ಯಪುಸ್ತಕ ಆಧಾರಿತ ತರಗತಿಗಳು, ಕ್ರಿಯಾಶೀಲ ಉತ್ತಮ ಗುಣಮಟ್ಟದ ಕಲಿಕಾ ಪದ್ಧತಿಗಳನ್ನು ಅಳವಡಿಸಲಾಗುವುದು. ಭವಿಷ್ಯದ ವೃತ್ತಿಪರ ತರಬೇತಿಗಳನ್ನು 6 ನೇ ತರಗತಿಯಿಂದ ಆರಂಭಿಸಲು, ಪಠ್ಯಕ್ರಮವನ್ನು ಉದ್ಯಮ ಪಾಲುದಾರರ ಸಹಾಯದಿಂದ ವಿನ್ಯಾಸಗೊಳಿಸಿ ಜಂಟಿ ಪ್ರಮಾಣ ಪತ್ರ ನೀಡಲು ಮತ್ತು 10 ನೇ ಮತ್ತು 12ನೇ ತರಗತಿಯಲ್ಲಿ ನಿರ್ಗಮನ ಆಯ್ಕೆಗಳನ್ನು ಒದಗಿಸಲು ಉದ್ದೇಶಿಸಿದೆ. ಈ ಶಾಲೆಗಳು ಸಮರ್ಥ ಶಾಲಾ ಮುಖ್ಯಸ್ಥರು ಮತ್ತು ಅರ್ಹ ಶಿಕ್ಷಕರ ಸಂಪೂರ್ಣ ಸಂಪನ್ಮೂಲವನ್ನು ಹೊಂದಲು ಕೌನ್ಸಲಿಂಗ್ ಮೂಲಕ ವರ್ಗಾವಣೆ ಪ್ರಕ್ರಿಯೆಯಲ್ಲಿ ಸೂಕ್ತ ತಿದ್ದುಪಡಿಗಳನ್ನು ತರಲಾಗುವುದು ಮತ್ತು ಶಿಕ್ಷಕರ ಪ್ರೋತ್ಸಾಹಕ ಕಾರ್ಯಕ್ರಮಗಳನ್ನು ಜಾರಿಗೊಳಿಸಿ ಈ ಶಾಲೆಗಳನ್ನು ಪ್ರೋತ್ಸಾಹಿಸಲಾಗುವುದು ಶಿಕ್ಷಕರ ಅಗತ್ಯಕ್ಕನುಗುಣವಾದ ತರಬೇತಿ, ಸಾಮರ್ಥ್ಯಾಭಿವೃದ್ಧಿ ಉಪಕ್ರಮಗಳ ಮೂಲಕ ತರಗತಿ ಕಲಿಕೆಯ ಅಭ್ಯಾಸಗಳನ್ನು ಬಲಪಡಿಸಲಾಗುವುದು. ಇದು ಪರಿಣಾಮಕಾರಿ ಶಿಕ್ಷಣ ಶಾಸ್ತ್ರ ಮತ್ತು ವಿದ್ಯಾರ್ಥಿಗಳ ತೊಡಗಿಸಿಕೊಳ್ಳುವಿಕೆಯನ್ನು ಸುಧಾರಿಸುತ್ತದೆ. ಸುಧಾರಿತ ನಿರ್ವಹಣೆ, ಅಗತ್ಯ ಧನಸಹಾಯ, ಶಾಲಾ ನಿರ್ವಹಣೆಯನ್ನು ಹೊರಗುತ್ತಿಗೆ ಮಾಡುವುದು, ಶಾಲೆಗಳು ಸ್ವಂತ

ಮೂಲದಿಂದ ಆದಾಯವನ್ನು ಸಂಗ್ರಹಿಸುವುದು, ಆದಾಯ ಸಂಗ್ರಹದ ಆಯ್ಕೆಗಳನ್ನು ಒದಗಿಸುವುದು ಮತ್ತು ಶಾಲಾ ಆಡಳಿತ ಸಮಿತಿಗಳನ್ನು ಸ್ಥಾಪಿಸುವ ಮೂಲಕ ಈ ಶಾಲೆಗಳನ್ನು ಬಲಪಡಿಸಲಾಗುವುದು.

ಪ್ರೌಢಶಾಲಾ ವಿದ್ಯಾರ್ಥಿಗಳ ಕಲಿಕೆಯನ್ನು ಸುಧಾರಿಸುವುದು ಹಾಗು 10ನೇ - 12ನೇ ತರಗತಿಯ ಮಂಡಳಿ ಪರೀಕ್ಷೆಗಳಲ್ಲಿ ಫಲಿತಾಂಶವನ್ನು ಹೆಚ್ಚಿಸುವ ಕಡೆ ಗಮನ ಹರಿಸಲಾಗಿದೆ. ಪ್ರೌಢ ತರಗತಿಗಳ ಫಲಿತಾಂಶಗಳಿಗೆ ವಿಶೇಷ ಒತ್ತು ನೀಡಲಾಗುವುದು. ಇದರಲ್ಲಿ STEAM ಶಿಕ್ಷಣ, ವೃತ್ತಿಪರ ತರಬೇತಿ, ವೃತ್ತಿ ಸಲಹೆ, ಸ್ಪರ್ಧಾತ್ಮಕ ಪರೀಕ್ಷೆ ತಯಾರಿ ಮತ್ತು 21ನೇ ಶತಮಾನದ ಕೌಶಲಗಳಾದ ಸೃಜನಶೀಲತೆ, ವಿಮರ್ಶಾತ್ಮಕ ಚಿಂತನೆ, ಸಹಯೋಗ, ಸಂವಹನ ಮತ್ತು ಜೀವನ ಕೌಶಲಗಳ ಅಭಿವೃದ್ಧಿಯನ್ನು ಸಮ್ಮಿಳಿತಗೊಳಿಸಲಾಗುವುದು. AI ಮತ್ತು ಡಿಜಿಟಲ್ ಸಂಪನ್ಮೂಲಗಳನ್ನು ಸಂಯೋಜಿಸುವ ಮೂಲಕ ಹಾಗೂ ಮೂಲಸೌಕರ್ಯವನ್ನು ಸುಧಾರಿಸುವ ಮತ್ತು ವ್ಯಾಪ್ತಿಯನ್ನು ವಿಸ್ತರಿಸುವ ಮೂಲಕ KPS ಸಾರ್ವಜನಿಕ ಶಿಕ್ಷಣದ ಪ್ರಗತಿಪರ ಮರುಕಲ್ಪನೆಯನ್ನು ನೀಡುತ್ತದೆ. ಈ ಶಾಲೆಗಳು ಉಚಿತ ಸಾರಿಗೆ ಸೌಲಭ್ಯ, ಮತ್ತು ತಾಂತ್ರಿಕ ಸಮ್ಮಿಳಿತದ ಕಲಿಸುವಿಕೆಯೊಂದಿಗೆ ಪೋಷಕರಿಗೆ ನೆಚ್ಚಿನ ಆಯ್ಕೆಯಾಗಿ ಮಾರ್ಪಟ್ಟು ಖಾಸಗಿ ಶಾಲೆಗಳ ಆದ್ಯತೆಯನ್ನು ಕಡಿಮೆ ಮಾಡುತ್ತವೆ. ಕೆಪಿಎಸ್ ಮಾದರಿಯು ಕರ್ನಾಟಕದಲ್ಲಿ ಸಮಾನ, ಉತ್ತಮ ಗುಣಮಟ್ಟದ ಶಿಕ್ಷಣಕ್ಕಾಗಿ ಬಲವಾದ ಮಾನದಂಡವನ್ನು ಸ್ಥಾಪಿಸುತ್ತದೆ ಮತ್ತು ಕರ್ನಾಟಕದ ಶಾಲಾ ಶಿಕ್ಷಣ ಪರಿಸರ ವ್ಯವಸ್ಥೆಯಲ್ಲಿ ಸರ್ಕಾರಿ ಶಾಲೆಗಳ ಸ್ಥಾನವನ್ನು ಮರುಸ್ಥಾಪಿಸುತ್ತದೆ.

ಮೇಲ್ಕಂಡ ಪ್ರಸ್ತಾವನೆಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ

**ಸರ್ಕಾರದ ಆದೇಶ ಸಂಖ್ಯೆ: ಇಪಿ 64 ಎಂಪಿಇ 2024.**
**ಬೆಂಗಳೂರು, ದಿನಾಂಕ: 15.10.2025.**

ಪ್ರಸ್ತಾವನೆಗಳಲ್ಲಿ ವಿವರಿಸಲಾಗಿರುವ ಅಂಶಗಳ ಹಿನ್ನೆಲೆಯಲ್ಲಿ , 2025-26 ಮತ್ತು 2026-27ನೇ ಸಾಲುಗಳಲ್ಲಿ ಈ ಆದೇಶದೊಂದಿಗೆ ಅನುಬಂಧಿಸಿರುವ ರಾಜ್ಯದಲ್ಲಿರುವ ಆಯ್ದ 500 ಸರ್ಕಾರಿ ಶಾಲೆಗಳನ್ನು (ಮ್ಯಾಗ್ನೆಟ್ ಶಾಲೆಗಳು) ಗುರುತಿಸಿ ರಾಜ್ಯ ಆಯವ್ಯಯದ ಅನುದಾನ ಮತ್ತು ಏಷಿಯನ್ ಡೆವಲಪ್‌ಮೆಂಟ್ ಬ್ಯಾಂಕ್ ಸಾಲಯೋಜನೆಯಡಿ ಅನುದಾನದಲ್ಲಿ ಹೆಚ್ಚುವರಿ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಮುಂದಿನ ಕ್ರಮಗಳಿಗೆ ಒಳಪಟ್ಟು ಸುಸಜ್ಜಿತ ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಉನ್ನತೀಕರಿಸಲು (ಅನುಬಂಧ-1 ರಲ್ಲಿ 474 ಶಾಲೆಗಳನ್ನು ಉನ್ನತೀಕರಿಸಲು ಮಂಜೂರಾತಿ ನೀಡಲಾಗಿದ್ದು, ಬಾಕಿ 26 ಶಾಲೆಗಳಿಗೆ ಮುಂದಿನ ದಿನಗಳಲ್ಲಿ ಮಂಜೂರಾತಿ ನೀಡಲಾಗುವುದು) ಮತ್ತು ಕಲ್ಯಾಣ ಕರ್ನಾಟಕ ವ್ಯಾಪ್ತಿಯ 07 ಜಿಲ್ಲೆಗಳಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅನುದಾನದಲ್ಲಿ 2025-26 ಮತ್ತು 2026-27ನೇ ಸಾಲುಗಳಲ್ಲಿ ಆಯ್ದ 200 ಸರ್ಕಾರಿ ಶಾಲೆಗಳನ್ನು(ಮ್ಯಾಗ್ನೆಟ್ ಶಾಲೆಗಳು) ಗುರುತಿಸಿ ಹೆಚ್ಚುವರಿ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಮುಂದಿನ ಕ್ರಮಗಳಿಗೆ ಒಳಪಟ್ಟು ಸುಸಜ್ಜಿತ ಕರ್ನಾಟಕ ಪಬ್ಲಿಕ್

ಶಾಲೆಗಳಾಗಿ ಉನ್ನತೀಕರಿಸಿ ನಿಯಮಗಳನುಸಾರ ತಯಾರಿಸುವ ಶಾಲಾವಾರು ವಿಸ್ತೃತ ಯೋಜನಾ ವರದಿಯಂತೆ (Detailed Project Report) ಪ್ರತಿ ಶಾಲೆಗೆ ರೂ 2.00 ಕೋಟಿಗಳಿಂದ ರೂ.4.00 ಕೋಟಿಗಳ ಅನುದಾನ ಒದಗಿಸಲು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳ ಪಾಲನೆಗೆ ಒಳಪಟ್ಟು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಇವರಿಗೆ ಅನುಮತಿ ನೀಡಿ ಆದೇಶಿಸಿದೆ.

i. 2025-26 ಬಜೆಟ್ ಘೋಷಣೆಯಂತೆ 500 ಸರ್ಕಾರಿ ಶಾಲೆಗಳನ್ನು (ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಹಂತದ ಅಧಿಕಾರಿಗಳಿಂದ ಗುರುತಿಸಿ, ಪರಿಶೀಲಿಸಲ್ಪಟ್ಟ ಮ್ಯಾಗ್ನೆಟ್ ಶಾಲೆಗಳು) ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಉನ್ನತೀಕರಿಸಿ ಅನುಷ್ಠಾನಗೊಳಿಸುವುದು. ಏಷಿಯನ್ ಡೆವಲಪ್‌ಮೆಂಟ್ ಬ್ಯಾಂಕ್ ಸಾಲ ಮತ್ತು ರಾಜ್ಯದ ಅನುದಾನದಿಂದ ಪ್ರತಿ ಶಾಲೆಯಲ್ಲಿ ಕನಿಷ್ಠ 1200 ವಿದ್ಯಾರ್ಥಿಗಳಿಗೆ ಅವಶ್ಯಕವಿರುವ ಸಮರ್ಪಕ ಮೂಲ ಸೌಕರ್ಯಗಳನ್ನು ನಿರ್ಮಿಸಲು ಪ್ರತಿ ಶಾಲೆಗೆ ಅಂದಾಜು 2 ರಿಂದ 4 ಕೋಟಿ ರೂಪಾಯಿಗಳನ್ನು ಶಾಲಾವಾರು ನಿಯಮಗಳಂತೆ ಅರ್ಹತೆಯಂತೆ ಸಿದ್ಧಪಡಿಸುವ ವಿಸ್ತೃತ ಯೋಜನಾ ವರದಿ (Detailed Project Report) ಗೆ ಅನುಸಾರವಾಗಿ ನಿಯಮಗಳಂತೆ ಒದಗಿಸಲು ಅನುಮತಿಸಿದೆ.

ii. 2025-26 ಬಜೆಟ್ ಘೋಷಣೆಯಂತೆ ಕಲ್ಯಾಣ ಕರ್ನಾಟಕದಲ್ಲಿ 50 ಸರ್ಕಾರಿ ಶಾಲೆಗಳನ್ನು (ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಹಂತದ ಅಧಿಕಾರಿಗಳಿಂದ ಗುರುತಿಸಿ, ಪರಿಶೀಲಿಸಲ್ಪಟ್ಟ ಮ್ಯಾಗ್ನೆಟ್ ಶಾಲೆಗಳು) ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಉನ್ನತೀಕರಣಗೊಳಿಸಿ ಅನುಷ್ಠಾನಗೊಳಿಸುವುದು. ಪ್ರತಿ ಶಾಲೆಯಲ್ಲಿ ಕನಿಷ್ಠ 1200 ವಿದ್ಯಾರ್ಥಿಗಳಿಗೆ ಅವಶ್ಯಕವಿರುವ ಸಮರ್ಪಕ ಮೂಲ ಸೌಕರ್ಯಗಳನ್ನು ನಿರ್ಮಿಸಲು ಪ್ರತಿ ಶಾಲೆಗೆ ಅಂದಾಜು 2 ರಿಂದ 4 ಕೋಟಿ ರೂಪಾಯಿಗಳನ್ನು ಶಾಲಾವಾರು ನಿಯಮಗಳಂತೆ ಅರ್ಹತೆಯಂತೆ ಸಿದ್ಧಪಡಿಸುವ ವಿಸ್ತೃತ ಯೋಜನಾ ವರದಿ (Detailed Project Report) ಗೆ ಅನುಸಾರವಾಗಿ ನಿಯಮಗಳಂತೆ ಒದಗಿಸುವುದು. ಇದರೊಂದಿಗೆ 2025-27 ಸಾಲುಗಳಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (KKRDB) ಯಿಂದ ಅನುಮೋದಿತವಾದ ಹೆಚ್ಚುವರಿ 150 ಮ್ಯಾಗ್ನೆಟ್ ಶಾಲೆಗಳು ಸೇರಿದಂತೆ ಒಟ್ಟಾರೆ 200 ಮ್ಯಾಗ್ನೆಟ್ ಶಾಲೆಗಳನ್ನು KPS ಶಾಲೆಗಳಾಗಿ ಉನ್ನತೀಕರಣ ಮಾಡಲು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (KKRDB) ಅನುದಾನವನ್ನು ಬಳಸಿಕೊಳ್ಳಲು ಅನುಮತಿಸಿದೆ.

iii. 1 ರಿಂದ 5 ಕಿಲೋಮೀಟರ್ ವ್ಯಾಪ್ತಿಯ ಒಳಗಿನ ಚಿಕ್ಕ ಸರ್ಕಾರಿ ಶಾಲೆಗಳನ್ನು ಈ ಪ್ರಸ್ತಾಪಿತ ಕರ್ನಾಟಕ ಪಬ್ಲಿಕ್ ಶಾಲೆಗಳೊಂದಿಗೆ ಸುಲಲಿತವಾಗಿ ಸಮ್ಮಿಳಿತಗೊಳಿಸುವುದು. ಒಂದೇ UDISE ಕೋಡ್ ಬಳಸಿ ಶಿಕ್ಷಕ ಮತ್ತು ಶಿಕ್ಷಕೇತರ ಸಿಬ್ಬಂದಿಯವರ ಸೇವೆಯನ್ನು, ಕೆ.ಪಿ.ಎಸ್. ಶಾಲಾ ನಿರ್ವಹಣಾ ಅನುದಾನಗಳನ್ನು ಗರಿಷ್ಠ ಪ್ರಮಾಣದಲ್ಲಿ ಬಳಸಿಕೊಳ್ಳುವುದನ್ನು ಖಾತ್ರಿ ಪಡಿಸಿಕೊಳ್ಳುವುದು ಹಾಗೂ ಶಾಲಾ ವಿದ್ಯಾರ್ಥಿಗಳಿಗೆ ಉಚಿತ ಸಾರಿಗೆ ವ್ಯವಸ್ಥೆಯನ್ನು ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (SDMC) ಮೂಲಕ ಒದಗಿಸುವ ಮೂಲಕ ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ (RTE) ಮತ್ತು ನಿಯಮಗಳಿಗೆ ಅನುಗುಣವಾಗಿ ಶಾಲಾ ವ್ಯಾಪ್ತಿಯಲ್ಲಿರುವ ಮಕ್ಕಳಿಗೆ

ಗುಣಮಟ್ಟದ ಕಲಿಕೆ, ಶಾಲಾ ಪ್ರವೇಶ & ಶಾಲಾ ಸೇರ್ಪಡೆಗಾಗಿ ಸಮಾನ ಅವಕಾಶ ಒದಗಿಸಿರುವುದನ್ನು ಖಾತ್ರಿಪಡಿಸಿಕೊಳ್ಳಲು ಆದೇಶಿಸಿದೆ.

iv. ಎಲ್ಲಾ ಕರ್ನಾಟಕ ಪಬ್ಲಿಕ್ ಶಾಲೆಗಳು ತಾವು ಏಕರೂಪದ ನೀತಿಯನ್ನು ಪಾಲಿಸುವಂತೆ 'ಕರ್ನಾಟಕ ಪಬ್ಲಿಕ್ ಶಾಲಾ ಮಾನಕ' ಕೈಪಿಡಿಯನ್ನು ಅಳವಡಿಸಿಕೊಳ್ಳುವುದು. ಸದರಿ ಮಾನಕಗಳಲ್ಲಿ ಗುಣಮಟ್ಟದ ಕನಿಷ್ಠ ಮಾನದಂಡಗಳನ್ನು ಹೊಂದುವುದು, LKG ಯಿಂದ 5ನೇ ತರಗತಿಯವರೆಗೆ ಏಕ ತರಗತಿ ಪಠ್ಯಪುಸ್ತಕ ಆಧಾರಿತ ದ್ವಿಭಾಷಾ ಮಾಧ್ಯಮದ ಬೋಧನೆಯನ್ನು ಅಳವಡಿಸಿಕೊಳ್ಳುವುದು, 6 ರಿಂದ 10ನೇ ತರಗತಿಯವರೆಗೆ ಮಾಧ್ಯಮವಾರು ಏಕತರಗತಿ ಪಠ್ಯಪುಸ್ತಕ ಆಧಾರಿತ ತರಗತಿಗಳು, ಮತ್ತು ಕ್ರಿಯಾಶೀಲ ಬೋಧನಾ ಪದ್ಧತಿಯನ್ನು ಅಳವಡಿಸಿಕೊಳ್ಳುವುದು, Iನೇ ತರಗತಿಯಿಂದ ಕಂಪ್ಯೂಟರ್ ಶಿಕ್ಷಣದ ಪರಿಚಯ, VIನೇ ತರಗತಿಯಿಂದ ಉದ್ಯಮ ಸಮ್ಮಿಳಿತ ವೃತ್ತಿಪರ ಕೌಶಲ ಆಧಾರಿತ ಪಠ್ಯಕ್ರಮದ ಪರಿಚಯ ಮತ್ತು VIIIನೇ ತರಗತಿಯಿಂದ ಮಂಡಳಿ ಪರೀಕ್ಷೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಾಮರ್ಥ್ಯ ಅಭಿವೃದ್ಧಿ ತರಗತಿಗಳನ್ನು ಪ್ರಾರಂಭಿಸಲು ಅನುಮತಿಸಿದೆ. ಈ ಸಂಬಂಧ ಅಗತ್ಯತೆಗಳನ್ನು ಗುರುತಿಸಿ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರು ವಿಸ್ತೃತ ಪ್ರಸ್ತಾವನೆಯನ್ನು ತುರ್ತಾಗಿ ಸಿದ್ಧಪಡಿಸಿ ಸಲ್ಲಿಸುವುದು

v. ಪ್ರತಿ ಕರ್ನಾಟಕ ಪಬ್ಲಿಕ್ ಶಾಲೆಗೆ (KPS) ಒಂದು ಆಡಳಿತ ಮಂಡಳಿಯನ್ನು ರಚಿಸುವುದು. ಸದರಿ ಮಂಡಳಿಗೆ ಕರ್ನಾಟಕ ಪಬ್ಲಿಕ್ ಶಾಲೆಗಳ (KPS) ಪ್ರಸ್ತುತ ವೇತನ ಬಟವಾಡೆ ಅಧಿಕಾರಿಯಾಗಿರುವ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರನ್ನು ಅಧ್ಯಕ್ಷರನ್ನಾಗಿ, ಪ್ರೌಢಶಾಲೆ ಮತ್ತು ಪ್ರಾಥಮಿಕ ಶಾಲೆಯ ಮುಖ್ಯಸ್ಥರುಗಳನ್ನು ಉಪಾಧ್ಯಕ್ಷರನ್ನಾಗಿ ನೇಮಿಸುವುದು. ಶಾಲೆಯು ಒಂದೇ ನಿರ್ವಹಣಾ ಬ್ಯಾಂಕ್ ಖಾತೆಯನ್ನು ಹೊಂದಿರುವುದು. ಸದರಿ ಖಾತೆಯನ್ನು ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು SDMC ಯಿಂದ ನಾಮನಿರ್ದೇಶನಗೊಂಡ ಇಬ್ಬರು ಸದಸ್ಯರು ನಿರ್ವಹಿಸುವುದು. ಸಂಬಂಧಿಸಿದ ವಿಧಾನ ಸಭಾ ಕ್ಷೇತ್ರದ ಶಾಸಕರ ಅಧ್ಯಕ್ಷತೆಯಲ್ಲಿ ಶಾಲಾ ಅಭಿವೃದ್ಧಿ ಮತ್ತು ಮೇಲ್ವಿಚಾರಣಾ ಸಮಿತಿಯನ್ನು (SDMC) ರಚಿಸುವುದು. ಈ ಸಮಿತಿಯಲ್ಲಿ ಸಮ್ಮಿಳಿತಗೊಂಡ ಶಾಲೆಗಳ SDMC ಸದಸ್ಯರಲ್ಲಿ ಕನಿಷ್ಠ ಇಬ್ಬರು ಸದಸ್ಯರನ್ನು ಒಳಗೊಳ್ಳುವಂತೆ ಅಗತ್ಯ ಕ್ರಮವಹಿಸತಕ್ಕದ್ದು. ಆಡಳಿತ ಮಂಡಳಿಯು ಶಾಲೆಯ ಸಮಗ್ರ ಕಾರ್ಯನಿರ್ವಹಣೆಯ ಮೇಲ್ವಿಚಾರಣೆ ಮತ್ತು ಕಾರ್ಯನಿರ್ವಹಣೆಯನ್ನು ಖಾತರಿಪಡಿಸಿಕೊಳ್ಳಲು ಕನಿಷ್ಠ ಎರಡು ವಾರಗಳಿಗೊಮ್ಮೆ ಸಭೆ ಸೇರಲು ಆದೇಶಿಸಿದೆ. ಈ ಸಂಬಂಧ ಸದರಿ ಕ್ರಮಗಳನ್ನು ಅನುಷ್ಠಾನಗೊಳಿಸಲು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರು ವಿಸ್ತೃತ ಪ್ರಸ್ತಾವನೆಯನ್ನು ತುರ್ತಾಗಿ ಸಿದ್ಧಪಡಿಸಿ ಸಲ್ಲಿಸುವುದು.

vi. KPS ಶಾಲೆಯಲ್ಲಿ ಕನಿಷ್ಠ ಹತ್ತು ವರ್ಷಗಳ ಸ್ಥಿರ ಸೇವಾ ಅವಧಿಯನ್ನು ಖಾತರಿಪಡಿಸಲು ಕರ್ನಾಟಕ ರಾಜ್ಯ ಸಿವಿಲ್ ಸರ್ವೀಸಸ್ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಕಾಯಿದೆಗೆ ತಿದ್ದುಪಡಿಗಳನ್ನು ತರುವುದು ಹಾಗೂ ಕರ್ನಾಟಕ ಪಬ್ಲಿಕ್ ಶಾಲೆಗಳಿಗೆ ನಿಯುಕ್ತಿ ಹೊಂದಲು ಸೇವಾ ನಿರತ ಶಿಕ್ಷಕರಿಗೆ ಅರ್ಹತಾ ಪರೀಕ್ಷೆ ನಡೆಸಿ, ಆಯ್ಕೆಯಾದವರಿಗೆ ಅಗತ್ಯ ತರಬೇತಿ ಮತ್ತು

ಕೌಶಲಾಭಿವೃದ್ಧಿ ತರಬೇತಿಯನ್ನು ನೀಡಲು ಅನುಮತಿಸಿದೆ. ಈ ಸಂಬಂಧ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರು ವಿಸ್ತೃತ ಪ್ರಸ್ತಾವನೆಯನ್ನು ತುರ್ತಾಗಿ ಸಿದ್ಧಪಡಿಸಿ ಸಲ್ಲಿಸುವುದು.

vii. ADB ಯೋಜನೆ ಮತ್ತು KKRDB ನಿಧಿಗಳ ಅಡಿಯಲ್ಲಿ 700 ಮ್ಯಾಗ್ನೆಟ್ ಶಾಲೆಗಳನ್ನು KPS ಶಾಲೆಗಳಾಗಿ ಉನ್ನತೀಕರಿಸುವ ಸಂಬಂಧ ಪ್ರತಿ ಶಾಲೆಯ ಉನ್ನತೀಕರಣದ ವೆಚ್ಚಕ್ಕಾಗಿ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲು KTPP ಕಾಯಿದೆ ಮತ್ತು ನಿಯಮಗಳಿಗೆ ಅನುಗುಣವಾಗಿ ಟೆಂಡರ್ ಕರೆಯಲು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದೆ.

viii. ಚಿತ್ರದುರ್ಗ, ತುಮಕೂರು, ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಹತ್ತು CEPMIZ ತಾಲೂಕುಗಳಲ್ಲಿ 100 ಮ್ಯಾಗ್ನೆಟ್ ಶಾಲೆಗಳನ್ನು KPS ಶಾಲೆಗಳಾಗಿ ಉನ್ನತೀಕರಿಸಲು ಸಂಬಂಧಿಸಿದ ಜಿಲ್ಲೆಗಳಿಂದ Form-1 ಮತ್ತು Form-2ರಲ್ಲಿ ಸಕ್ಷಮ ಪ್ರಾಧಿಕಾರದಿಂದ ಅನುಮೋದಿತ ವಿಸ್ತೃತ ಯೋಜನಾ ವರದಿಗಳನ್ನು ಪಡೆಯಲು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರು ನಿಯಮಗಳಂತೆ ಅಗತ್ಯ ಕ್ರಮವಹಿಸುವುದು. ವಿಸ್ತೃತ ಯೋಜನಾ ವರದಿಯನ್ನು ಆಧರಿಸಿ KTPP ಕಾಯಿದೆ ಮತ್ತು ನಿಯಮಗಳಿಗೆ ಅನುಗುಣವಾಗಿ ಟೆಂಡರ್ ಕರೆಯಲು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಇವರಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದೆ.

ix. ರಾಜ್ಯ ಆಯವ್ಯಯದ ಅನುದಾನ ಮತ್ತು ಏಷಿಯನ್ ಡೆವಲಪ್‌ಮೆಂಟ್ ಬ್ಯಾಂಕ್ ಸಾಲಯೋಜನೆಯಡಿ ಅನುದಾನದಲ್ಲಿ 500 ಕರ್ನಾಟಕ ಪಬ್ಲಿಕ್ ಶಾಲೆಗಳಿಗೆ ಹೆಚ್ಚುವರಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಮತ್ತು ಕಲ್ಯಾಣ ಕರ್ನಾಟಕ ವ್ಯಾಪ್ತಿಯ 07 ಜಿಲ್ಲೆಗಳಲ್ಲಿ 200 ಕರ್ನಾಟಕ ಪಬ್ಲಿಕ್ ಶಾಲೆಗಳಿಗೆ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅನುದಾನದಲ್ಲಿ ಹೆಚ್ಚುವರಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಶಾಲಾ ಶಿಕ್ಷಣ ಇಲಾಖೆಗೆ ಅಧಿಕಾರ ನೀಡಲಾಗಿದೆ.

x. ಪ್ರಸ್ತುತ ಅನುಬಂಧ-1ರಂತೆ 474 ಸರ್ಕಾರಿ ಶಾಲೆಗಳನ್ನು ರಾಜ್ಯ ಆಯವ್ಯಯದ ಅನುದಾನ ಮತ್ತು ಏಷಿಯನ್ ಡೆವಲಪ್‌ಮೆಂಟ್ ಬ್ಯಾಂಕ್ ಸಾಲ ಯೋಜನೆಯಡಿ ಅನುದಾನದಲ್ಲಿ ಕೆ.ಪಿ.ಎಸ್. ಶಾಲೆಗಳನ್ನಾಗಿ ಉನ್ನತೀಕರಿಸಲು ಮಂಜೂರಾತಿ ನೀಡಿದ್ದು, ಉಳಿದ 26 ಶಾಲೆಗಳನ್ನು ಮುಂದಿನ ದಿನಗಳಲ್ಲಿ ಕೆ.ಪಿ.ಎಸ್. ಶಾಲೆಗಳನ್ನಾಗಿ ಉನ್ನತೀಕರಿಸಲು ಮಂಜೂರಾತಿ ನೀಡಲಾಗುವುದು.

xi. ಕ.ಕ.ಪ್ರ.ಅ.ಮಂಡಳಿ ಅನುದಾನದಲ್ಲಿ ಕೆ.ಪಿ.ಎಸ್. ಶಾಲೆಗಳನ್ನಾಗಿ ಉನ್ನತೀಕರಿಸಲು ಉದ್ದೇಶಿಸಿರುವ 200 ಸರ್ಕಾರಿ ಶಾಲೆಗಳು ಮತ್ತು 10 CEPMIZ ತಾಲ್ಲೂಕುಗಳಲ್ಲಿ CEPMIZ ಅನುದಾನದಿಂದ ಕೆ.ಪಿ.ಎಸ್. ಶಾಲೆಗಳನ್ನಾಗಿ ಉನ್ನತೀಕರಿಸಲು ಉದ್ದೇಶಿಸಿರುವ 100 ಸರ್ಕಾರಿ ಶಾಲೆಗಳಿಗೆ ಸಂಬಂಧಿಸಿದಂತೆ ವಿಸ್ತೃತವಾದ ಸರ್ಕಾರದ ಆದೇಶವನ್ನು ಶೀಘ್ರದಲ್ಲಿಯೇ ಹೊರಡಿಸಲಾಗುವುದು.

ಈ ಆದೇಶವನ್ನು ಸಚಿವ ಸಂಪುಟದ ಟಿಪ್ಪಣಿ ಸಂಖ್ಯೆ: ಸಿ.726/2025 ದಿನಾಂಕ:04.09.2025 ಮತ್ತು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 508 ವೆಚ್ಚ /2025 ದಿನಾಂಕ:26.06.2025 ಹಾಗೂ ಸರ್ಕಾರದ ಆದೇಶ ಸಂಖ್ಯೆ: ಎಫ್ ಡಿ 03 ಟಿ.ಎಫ್.ಪಿ 2025 ದಿನಾಂಕ: 24.09.2025 ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ ಇವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ

ಮತ್ತು ಅವರ ಹೆಸರಿನಲ್ಲಿ

**ಶುಭಮಂಗಳ ಆರ್. ವಿ**

**ವಿಶೇಷಾಧಿಕಾರಿ ಹಾಗೂ ಪದನಿಮಿತ್ತ**

ಸರ್ಕಾರದ ಅಧೀನ ಕಾರ್ಯದರ್ಶಿ(ಯೋಜನೆ),

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಆಡಿಟ್ 1 & 2) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
3. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು.
4. ನಿರ್ದೇಶಕರು,( ಪದವಿ ಪೂರ್ವ) ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
5. ಕಾರ್ಯದರ್ಶಿಗಳು, ಕ.ಕ.ಪ್ರ.ಅ.ಮಂಡಳಿ, ಕಲಬುರಗಿ.
6. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ/ಧಾರವಾಡ ಆಯುಕ್ತಾಲಯ.
7. ನಿರ್ದೇಶಕರು, ಪ್ರಾಥಮಿಕ / ಪ್ರೌಢ ಶಿಕ್ಷಣ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
8. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.
9. ರಾಜ್ಯ ಕಾರ್ಯದರ್ಶಿಗಳು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ, ಅರಮನೆ ರಸ್ತೆ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ 7 & 8), ವಿಧಾನಸೌಧ, ಬೆಂಗಳೂರು.
11. ಆಂತರಿಕ ಆರ್ಥಿಕ ಸಲಹೆಗಾರರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು.
12. ಸಾಪ್ತಾಹಿಕ ರಾಜ್ಯ ಪತ್ರ / ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ.**

1. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಬೆಂಗಳೂರು.